<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆಃ **1220/2024**</u>

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,
ಮೂಡಿಗೆರೆ.

ವಿರುದ್ಧ

<u>ಆರೋಪಿ</u> : ಸಂದೀಪ, ವಯಸ್ಸು ಸುಮಾರು 30 ವರ್ಷ,
ಬಿನ್ ಸಂಜೀವ, ವಾಸಃ ಎನ್ ಎಂ ಡಿ ಸಿ ಹಳ್ಳಿ,
ಇಂದಿರಾನಗರ, ಅಲ್ಲಂಪುರ ಗ್ರಾಮ, ಕೈಮರ ಅಂಚೆ,
ಚಿಕ್ಕಮಗಳೂರು ತಾಲ್ಲೂಕು ಮತ್ತು ಜಿಲ್ಲೆ.

<u>ದೋಷಾರೋಪಣೆ</u>

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕಃ 24.05.2024 ರಂದು ಬೆಳಿಗ್ಗಿನ ಸಮಯ ಸುಮಾರು 8.00 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡಿಗೆರೆ ತಾಲ್ಲೂಕು, ಕುನ್ನಳ್ಳಿ ಗ್ರಾಮದ ಅಂಬೇಡ್ಕರ್ ನಗರದಲ್ಲಿರುವ ಚಾಸಾ-1 ಜಯರಾಮ ರವರು ಅವರ ಮನೆಗೆ ಹಾಕಿದ್ದ ಬೀಗವನ್ನು ಆರೋಪಿಯಾದ ನೀವು 2.5 ಅಡಿ ಉದ್ದದ ಕಬ್ಬಿಣದ ಸರಳಿನಿಂದ ಮುರಿದು ಒಳಗೆ ಪ್ರವೇಶ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **454** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಮುಂದುವರೆದು ಚಾಸಾ1 ರವರ ಮನೆಯ ಒಳಗೆ ಪ್ರವೇಶ ಮಾಡಿ ಸದರಿ ಚಾಸಾ-1 ರವರು ಮನೆಯ ರೂಮಿನಲ್ಲಿಟ್ಟಿದ್ದ ಅಲ್ಮೇರಾದ ಬೀಗ ತೆಗೆದು ಅದರಲ್ಲಿದ್ದ 70,000/- ರೂಪಾಯಿ ನಗದು ಹಣ ಹಾಗೂ ಸುಮಾರು 1.5 ಗ್ರಾಂ ನ ಚಿನ್ನದ ಒಂದು ಜೊತೆ ಕಿವಿಯೋಲೆಯನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **380** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

(ಆರೋಪಿಗೆ ದಿನಾಂಕ 15.11.2024 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ<br>ದಿನಾಂಕ: 15.11.2024

ಪ್ರಧಾನ ಸಿವಿಲ್ ನ್ಯಾಯಾಧೀಶರು<br>ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.